ಓ.ಎಸ್. ನಂ. 77/2017

ಪಿ.ಡಬ್ಲ್ಯು: 02 (ಚಂದ್ರಯ್ಯ)

ದಿನಾಂಕಃ 11.03.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀಸವಾಲುಃ ಪ್ರತಿವಾದಿ ಪರ – ಶ್ರೀ HGPP ವಕೀಲರಿಂದ.

ನಾನು 10 ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ಈ ದಾವೆಯನ್ನು ತಿಪ್ಪೇಸ್ವಾಮಿಯವರ ವಿರುದ್ದ ಅವರ ಮಕ್ಕಳು ಹೂಡಿರುತ್ತಾರೆ. ನಾನು ವಾದಿ ಹಾಗೂ ಪ್ರತಿವಾದಿಯವರನ್ನು ನೋಡಿರುವುದಿಲ್ಲ ಎಂದರೆ ನೋಡಿರುತ್ತೇನೆ. ದಾವಾ ಸ್ವತ್ತಿನ ಪೂರ್ವದಲ್ಲಿ ನನ್ನ ಜಮೀನು ಇದೆ ಎಂದು ತೋರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ವಾದಿ ಹಾಗೂ ಪ್ರತಿವಾದಿಗಳು ದಾವಾ ಸ್ವತ್ತನ್ನು ಉಳುಮೆ ಮಾಡುತ್ತಿಲ್ಲ ಎಂದರೆ ಸರಿಯಲ್ಲ. ಇಂದಿಗೂ ಅದನ್ನು ಅವರು ಉಳುಮೆ ಮಾಡುತ್ತಿಲ್ಲ ಎಂದರೆ ಸರಿಯಲ್ಲ. ವಾದಿಗಳ ಕುಟುಂಬದ ಬಗ್ಗೆ ಹಾಗೂ ಅವರ ಆಸ್ತಿಯ ಬಗ್ಗೆ ನನಗೆ ಮಾಹಿತಿ ಇಲ್ಲದೇ ಇದ್ದರೂ ಸಹ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಎರ್ರಮ್ಮನಹಳ್ಳಿಯಲ್ಲಿದ್ದಾನೆ. ನಾನು 1 ನೇ ಪ್ರತಿವಾದಿಯವರ ಪತ್ನಿಯಾದ 2 ನೇ ಪ್ರತಿವಾದಿಯನ್ನು ನೋಡಿರುವುದಿಲ್ಲ. ನಾನು ಹೇಳಿರುವಂತೆ ನನ್ನ ಜಮೀನು ದಾವಾ ಸ್ವತ್ತಿನ ಪಕ್ಕದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲು ಮುಕ್ತಾಯ.

ಮರು-ವಿಚಾರಣೆ ಇಲ್ಲ.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.